**ಸಾಕ್ಷಿಯನ್ನು ದಿನಾಂಕಃ 23-11-2022 ರಂದು ಕರೆಯಿಸಿ ಪ್ರಮಾಣ ವಚನ ನೀಡಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ಶ್ರೀ.ಬಿ.ಟಿ.ಹೆಚ್. ವಕೀಲರವರಿಂದಃ**

ನಾನು ಈ ಪ್ರಕರಣಕ್ಕೆ ಸಂಬಂದಪಟ್ಟಂತೆ ಎಂ.ಆರ್.ನಂ.ಹೆಚ್2/2016-17 ನೇದ್ದನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಸರ್ವೆ ನಂ.495/ಎ ನೇದ್ದರ ಪಹಣಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ಸರ್ವೆ ನಂ.495 ಎ ನೇದ್ದಕ್ಕೆ ಸಂಬಂದಿಸಿದ ಐದು ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-3 ರಿಂದ 7 ಎಂದು, ದಾವಾ ಆಸ್ತಿಗೆ ಸಂಬಂದಿಸಿದ ಏಳು ಗಣಕೀಕೃತ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-8 ರಿಂದ 14 ಎಂದು, ಎಂ.ಆರ್.ಹೆಚ್53, ಹೆಚ್2, ಹೆಚ್7, ಹೆಚ್52, ಟಿ159 ಮತ್ತು ಟಿ233 ನೇದ್ದವುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-15 ರಿಂದ 20 ಎಂದು, ನೊಂದಾಯಿತ ದಾನಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-21 ಎಂದು, ನೊಂದಾಯಿತ ಕ್ರಯಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-22 ಎಂದು, ನೊಂದಾಯಿತ ಮೃತ್ಯುಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-23 ಎಂದು, ವಿಲ್ ದಸ್ತಾವೇಜು ರದ್ದುಪತ್ರದ ದೃಢೀಕೃತ ಪ್ರತಿಯನ್ನು ನಿಪಿ-24 ಎಂದು, ತಹಶಿಲ್ದಾರ ಹರಪನಹಳ್ಳಿ ಇವರ ಆದೇಶದ ದೃಢೀಕೃತ ಪ್ರತಿಯನ್ನು ನಿಪಿ-25 ಎಂದು, ಉಪವಿಭಾಗದಿಕಾರಿಗಳ ಆದೇಶದ ದೃಢೀಕೃತ ಪ್ರತಿಯನ್ನು ನಿಪಿ-26 ಎಂದು, ಉಪತಹಶಿಲ್ದಾರ್ ಇವರ ಆದೇಶದ ದೃಢೀಕೃತ ಪ್ರತಿಯನ್ನು ನಿಪಿ-27, ಎರಡು ಅಲಭ್ಯ ಪ್ರಮಾಣಪತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-28 ಮತ್ತು 29 ಎಂದು, ತಹಶಿಲ್ದಾರ್ ಹರಪನಹಳ್ಳಿ ನೀಡಿದ ಹಿಂಬರಹದೊಂದಿಗೆ ಐದು ದಾಖಲೆಗಳ ದೃಢೀಕೃತ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ-30 ಎಂದು ಗುರುತಿಸಲಾಯಿತು. ಆದ್ದರಿಂದ ದಾವೆಯನ್ನು ಡಿಕ್ರಿ ಮಾಡಬೇಕಾಗಿ ಕೋರಿಕೊಳ್ಳುತ್ತೇನೆ.

**ಪಾಟೀಸವಾಲುಃ** ಶ್ರೀ.ವಿ.ಡಿ.ಬಿ.ವಕೀಲರು ಪಾಟೀಸವಾಲಿಗೆ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.

( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸರಿಯಿದೆ.**

**ಸಿವಿಲ್ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ. ಹರಪನಹಳ್ಳಿ**